**All India Radio: Bangalore**
**Regional Bulletin In Kannada**
**21.03.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**21.03.2025 / 2.30 p.m.**

**<><><><>**

ಮುಖ್ಯಾಂಶಗಳು

- ಕರ್ನಾಟಕ ಧನ ವಿನಿಯೋಗ ವಿಧೇಯಕ - ೨೦೨೫ ಸೇರಿದಂತೆ ಹಲವು ವಿಧೇಯಕಗಳು ವಿಧಾನಸಭೆಯಲ್ಲಿಂದು ಅಂಗೀಕಾರ
- ಹನಿಟ್ರ್ಯಾಪ್ ವಿಚಾರದಲ್ಲಿ ಯಾರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಸದನದಲ್ಲಿ ಸ್ಪಷ್ಟನೆ ; ಸಿಬಿಐ ತನಿಖೆಗೆ ಒಪ್ಪಿಸುವಂತೆ ವಿರೋಧ ಪಕ್ಷಗಳ ಆಗ್ರಹ
- ಕಾವೇರಿ ನದಿ ಪಾತ್ರ ಒತ್ತುವರಿ ತಡೆಯಲು ತಂಡ ರಚನೆ: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಬೆಂಗಳೂರಿನಲ್ಲಿಂದು ಆರ್‌ಎಸ್‌ಎಸ್‌ನ ಅಖಿಲ ಭಾರತೀಯ ಪ್ರತಿನಿಧಿ ಸಭಾದ ೩ನೇ ವಾರ್ಷಿಕ ಸಭೆಗೆ ಚಾಲನೆ

<><><><>

ಕರ್ನಾಟಕ ಧನ ವಿನಿಯೋಗ ವಿಧೇಯಕ-೨೦೨೫, ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧಾರ ತಿದ್ದುಪಡಿ ವಿಧೇಯಕ-೨೦೨೫, ಕರ್ನಾಟಕ ಮಂತ್ರಿಗಳ ಸಂಬಳ ಮತ್ತು ಭತ್ಯೆಗಳ ತಿದ್ದುಪಡಿ ವಿಧೇಯಕ-೨೦೨೫ ಹಾಗೂ ಕರ್ನಾಟಕ ವಿಧಾನ ಮಂಡಲದ ಸಂಬಳ, ನಿವೃತ್ತಿ ವೇತನ ಮತ್ತು ಭತ್ಯೆಗಳು ತಿದ್ದುಪಡಿ ವಿಧೇಯಕ-೨೦೨೫ ವಿಧೇಯಕಗಳಿಗೆ ವಿಧಾನಸಭೆಯಲ್ಲಿಂದು ಅಂಗೀಕಾರ ದೊರೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಪರ್ಯಾಲೋಚಿಸಿ ಅಂಗೀಕರಿಸಲು ವಿಧಾನಭೆಯಲ್ಲಿ ಪ್ರಸ್ತಾವನೆಗಳು ಮಂಡಿಸಿದರು. ಪರ್ಯಾಲೋಚನೆ ನಂತರ ವಿಧೇಯಕಗಳು ಅಂಗೀಕಾರಗೊಂಡವು.

<><><><>

ಹನಿಟ್ರ್ಯಾಪ್‌ಗೆ ಸಂಬಂಧಿಸಿದಂತೆ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿರೋಧ ಪಕ್ಷದ ನಾಯಕ ಆರ್.ಅಶೋಕ, ಶಾಸಕರಾದ ಆರಗ ಜ್ಞಾನೇಂದ್ರ, ಸುನೀಲ್ ಕುಮಾರ್, ಸಚಿವ ಕೆ.ಎನ್.ರಾಜಣ್ಣ, ಹನಿಟ್ರ್ಯಾಪ್ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಿದ್ದು, ಹನಿಟ್ರ್ಯಾಪ್‌ಗೆ ಕಾರಣರಾದವರನ್ನು ವಜಾ ಮಾಡಬೇಕು ಹಾಗೂ ನ್ಯಾಯಾಂಗ ತನಿಖೆಗೆ ಒಪ್ಪಿಸಬೇಕು ಎಂದು ಒತ್ತಾಯಿಸಿದರು. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯಿಸಿ, ಸಚಿವ ಕೆ.ಎನ್.ರಾಜಣ್ಣ ಮಾಡಿರುವ ಆರೋಪಕ್ಕೆ ಈಗಾಗಲೇ ಗೃಹ ಸಚಿವರು ಉತ್ತರಿಸಿದ್ದಾರೆ. ಪ್ರಕರಣದಲ್ಲಿ ಯಾರೇ ಸಂತ್ರಸ್ತರಾದರೂ ರಕ್ಷಣೆ ಕೊಡಬೇಕಾಗಿರುವುದು ಸರ್ಕಾರದ ಜವಾಬ್ದಾರಿ. ಕಾನೂನಿನ ಪ್ರಕಾರ ತಪ್ಪಿತಸ್ಥರಿಗೆ ಶಿಕ್ಷೆಯಾಗಲೇಬೇಕು ಎಂದು ಹೇಳಿದರು. ರಾಜಣ್ಣ ದೂರು ಕೊಟ್ಟರೆ ಉನ್ನತ ಮಟ್ಟದ ತನಿಖೆ ಮಾಡಿಸಲಾಗುತ್ತದೆ ಎಂದು ಗೃಹ ಸಚಿವರು ಉತ್ತರಿಸಿದ ಮೇಲೆ ಪುನಃ ಪ್ರಸ್ತಾಪಿಸುವುದು ತರವಲ್ಲ. ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿಗಳು ಪುನರುಚ್ಚರಿಸಿದರು.

<><><><>

ರಾಜ್ಯದಲ್ಲಿ ಇಂದಿನಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಪ್ರಾರಂಭವಾಗಿದ್ದು, ೧೫ ಸಾವಿರದ ೮೮೧ ಪರೀಕ್ಷಾ ಕೇಂದ್ರಗಳಲ್ಲಿ ೮ ಲಕ್ಷದ ೯೬ ಸಾವಿರದ ೪೪೭ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ವಿಧಾನಸಭೆಯಲ್ಲಿಂದು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಶುಭ ಕೋರಿ ಮಾತನಾಡಿದ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ವಿದ್ಯಾರ್ಥಿಗಳ ಭವಿಷ್ಯಕ್ಕೆ ಮೊದಲನೇ ಹಂತವಾಗಿದ್ದು, ಇದು ಅಂತ್ಯವಲ್ಲ, ಆರಂಭ. ವಿದ್ಯಾರ್ಥಿಗಳು ರಾತ್ರಿ ಹಗಲೆನ್ನದೇ ಪರಿಶ್ರಮಪಟ್ಟು ಪರೀಕ್ಷೆಗೆ ಸಿದ್ಧವಾಗಿರುವ ಎಲ್ಲಾ ವಿದ್ಯಾರ್ಥಿಗಳು, ಮನೋ ಸ್ಥೈರ್ಯದಿಂದ ಪರೀಕ್ಷೆ ಎದುರಿಸಬೇಕು ಎಂದು ಹೇಳಿದರು. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಹಾಗೂ ವಿರೋಧ ಪಕ್ಷದ ನಾಯಕರಾದ ಅಶೋಕ ಅವರು ವಿದ್ಯಾರ್ಥಿಗಳಿಗೆ ಶುಭ ಕೋರಿದರು.

<><><><>

ಸಾರ್ವಜನಿಕ ಗುತ್ತಿಗೆಗಳಲ್ಲಿ ಪ್ರವರ್ಗ ಬಿ ಸಮುದಾಯಕ್ಕೆ ಶೇಕಡಾ ೪ ರಷ್ಟು ಮೀಸಲಾತಿ ನೀಡುವ ವಿಧೇಯಕ ಸಂಬಂಧ ವಿಧಾನಸಭೆಯಲ್ಲಿಂದು ಬಿಜೆಪಿ ನಾಯಕರು ಸದನದ ಬಾವಿಗಿಳಿದು

ಆಡಳಿತಾರೂಢ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಅಲ್ಲದೇ, ಬಿಜೆಪಿ ಶಾಸಕರು ವಿಧೇಯಕದ ಪ್ರತಿಗಳನ್ನು ಹರಿದು, ವಿಧಾನಸಭಾಧ್ಯಕ್ಷರ ಮೇಲೆ ಕಾಗದದ ಚೂರುಗಳನ್ನು ಎಸೆದರು. ಈ ಕ್ರಮವು ಸಮಗ್ರ ಅಭಿವೃದ್ಧಿ ಮತ್ತು ಸಕಾರಾತ್ಮಕ ಕ್ರಮಕ್ಕೆ ಸರ್ಕಾರದ ಬದ್ಧತೆಯೊಂದಿಗೆ ಹೊಂದಿಕೆಯಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದರು. ಆದರೆ ಬಿಜೆಪಿ ನಾಯಕರು ವಿಧೇಯಕವನ್ನು ಟೀಕಿಸಿದ್ದು, ಮೀಸಲಾತಿಯು ಧರ್ಮದ ಬದಲು ಆರ್ಥಿಕ ಮಾನದಂಡಗಳನ್ನು ಆಧರಿಸಿರಬೇಕು ಎಂದು ಒತ್ತಾಯಿಸಿದರು. ವಿಧಾನಸಭೆ ಕಲಾಪವನ್ನು ಸಭಾಧ್ಯಕ್ಷ ೩ ಗಂಟೆಗೆ ಮುಂದೊಡ್ಡಿದ್ದಾರೆ.

<><><>

ಸಚಿವರನ್ನು ಹನಿಟ್ರ್ಯಾಪ್‌ಗೆ ಒಳಪಡಿಸಲು ಯತ್ನಿಸಿದ ಆರೋಪದ ಬಗ್ಗೆ ಉನ್ನತಮಟ್ಟದ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನ ಪರಿಷತ್‌ನಲ್ಲಿಂದು ಭರವಸೆ ನೀಡಿದರು. ಬೆಳಗ್ಗೆ ಸದನ ಸಮಾವೇಶಗೊಂಡಾಗ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಷಯ ಪ್ರಸ್ತಾಪಿಸಿದಾಗ ಮಧ್ಯೆಪ್ರವೇಶಿಸಿದ ಸಚಿವರು, ಈ ವಿಚಾರದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಡಾ. ಜಿ.ಪರಮೇಶ್ವರ್, ಉನ್ನತಮಟ್ಟದ ತನಿಖೆ ನಡೆಸುವುದಾಗಿ ಈಗಾಗಲೇ ಹೇಳಿದ್ದಾರೆ. ಅಲ್ಲದೆ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ ಎಂದರು. ಹನಿಟ್ರ್ಯಾಪ್ ವಿಚಾರವನ್ನು ಮುಚ್ಚಿಡುವ ಉದ್ದೇಶ ಸರ್ಕಾರಕ್ಕೆ ಇಲ್ಲ. ಈ ವಿಚಾರದಲ್ಲಿ ಸತ್ಯಾಂಶವಿದ್ದರೆ ಬೆಳಕಿಗೆ ಬರಲಿ ಎಂಬ ಉದ್ದೇಶದಿಂದ ತನಿಖೆ ನಡೆಸಲಾಗುತ್ತದೆ. ಈ ವಿಚಾರದಲ್ಲಿ ವಿರೋಧ ಪಕ್ಷಗಳಿಗೆ ಅನುಮಾನ ಬೇಡ ಎಂದು ಸಚಿವ ಕೃಷ್ಣಬೈರೇಗೌಡ ಸ್ಪಷ್ಟಪಡಿಸಿದರು.

<><><>

ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯನ್ನು ಪ್ರತ್ಯೇಕ ಪ್ರತ್ಯೇಕ ಜಿಲ್ಲೆಯನ್ನಾಗಿ ಘೋಷಣೆ ಮಾಡಬೇಕು ಎಂದು ಆಡಳಿತ ಪಕ್ಷದ ಸದಸ್ಯ ಪ್ರಕಾಶ್ ಹುಕ್ಕೇರಿ ವಿಧಾನ ಪರಿಷತ್ತಿನಲ್ಲಿಂದು ಆಗ್ರಹಿಸಿದ್ದಾರೆ. ೨೦೨೫-೨೬ನೇ ಸಾಲಿನ ಆಯವ್ಯಯ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಚಿಕ್ಕೋಡಿಗೂ ಬೆಳಗಾವಿಗೂ ೧೯೦ ಕಿಲೋ ಮೀಟರ್ ಅಂತರವಿದೆ. ಜನರು ಬೆಳಗಾವಿ ಜಿಲ್ಲಾ ಕೇಂದ್ರಕ್ಕೆ ಬರಲು ಸಾಕಷ್ಟು ತೊಂದರೆ ಇದೆ. ಆದರೂ ಸರ್ಕಾರದಿಂದ ಜಿಲ್ಲೆ ಮಾಡುವ ಪ್ರಯತ್ನವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

<><><>

ಸಚಿವ ಕೆ.ಎನ್.ರಾಜಣ್ಣ ಅವರನ್ನು ಹನಿಟ್ರ್ಯಾಪ್ ಮಾಡಿದ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಅಥವಾ ಸಿಬಿಐ ತನಿಖೆಗೆ ವಹಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಕೆ.ಎನ್.ರಾಜಣ್ಣ, ವಿಧಾನಸಭೆಯಲ್ಲಿ ಹನಿಟ್ರ್ಯಾಪ್ ಬಗ್ಗೆ ಹೇಳಿದ್ದಾರೆ. ಇದರಲ್ಲಿ ಪ್ರಭಾವಿಗಳ ಕೈವಾಡ ಇದೆ ಎಂದು ಆರೋಪ ಮಾಡಲಾಗಿದೆ. ಪ್ರಕರಣ ಗಂಭೀರವಾಗಿರುವುದರಿಂದ ತನಿಖೆ ಮಾಡದೆ ಸುಮ್ಮನೆ ಬಿಡಬಾರದು ಎಂದು ಒತ್ತಾಯಿಸಿದರು. ಸಚಿವ ಕೆ.ಎನ್.ರಾಜಣ್ಣ ಸದನದಲ್ಲೇ ಮಾತಾಡಿರುವುದರಿಂದ ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಕೂಡಲೇ ಸರ್ಕಾರ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸಬೇಕು ಅಥವಾ ಸಿಬಿಐ ತನಿಖೆಗೆ ವಹಿಸಬೇಕು ಎಂದು ಆರ್.ಅಶೋಕ ಆಗ್ರಹಿಸಿದರು.

<><><>

ಕಾವೇರಿ ನದಿ ಮಲೀನತೆ ಹಾಗೂ ನದಿ ಪಾತ್ರಗಳ ಒತ್ತುವರಿ ತಡೆಯಲು ತಂಡ ರಚನೆ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕೊಡಗು ಜಿಲ್ಲೆಯ ಭಾಗಮಂಡಲದ ಶ್ರೀ ಭಗಂಡೇಶ್ವರ ದೇಗುಲ ಹಾಗೂ ಕಾವೇರಿ, ಸುಜ್ಯೋತಿ, ಕನ್ನಿಕಾ ನದಿಗಳ ತ್ರಿವೇಣಿ ಸಂಗಮದಲ್ಲಿ ಇಂದು ಪೂಜೆ ಸಲ್ಲಿಸಿ, ಪವಿತ್ರ ತೀರ್ಥ ಸಂಗ್ರಹಿಸಿ, ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ವಿಶ್ವ ಜಲದಿನದ ಅಂಗವಾಗಿ ಒಂದು ವಾರಗಳ ಕಾಲ ಜಲ ಸಂರಕ್ಷಣೆ ಅಭಿಯಾನ ನಡೆಯಲಿದೆ. ನೀರಿನ ದುರ್ಬಳಕೆ ತಡೆಗಟ್ಟಿ, ಸದ್ಬಳಕೆ ಮಾಡುವಂತೆ ಜಾಗೃತಿ ಮೂಡಿಸುವುದೇ ಕಾವೇರಿ ಆರತಿ ಉದ್ದೇಶ ಎಂದು ಅವರು ಹೇಳಿದರು. ನಾಳೆ ಕನ್ನಡ ಸಂಘಟನೆಗಳು ಕರೆ ನೀಡಿರುವ ಕರ್ನಾಟಕ ಬಂದ್‌ನ ಅವಶ್ಯಕತೆ ಇರಲಿಲ್ಲ. ರಾಜ್ಯ ಸರ್ಕಾರ ಈ ರಾಜ್ಯದ ನೆಲ, ಜಲ ಸಂರಕ್ಷಣೆ ನಿಟ್ಟಿನಲ್ಲಿ ಬದ್ಧವಾಗಿ ಕಾರ್ಯನಿರ್ವಹಿಸುತ್ತಿರುವಾಗ ಬಂದ್ ಅಗತ್ಯವಿರಲಿಲ್ಲ ಎಂದು ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟರು.

<><><>

ಬೆಂಗಳೂರಿನಲ್ಲಿ ಇಂದು ಆರ್‌ಎಸ್‌ಎಸ್‌ನ ಅಖಿಲ ಭಾರತೀಯ ಪ್ರತಿನಿಧಿ ಸಭಾದ ಮೂರನೇ ವಾರ್ಷಿಕ ರಾಷ್ಟ್ರೀಯ ಸಭೆಯನ್ನು ಆರ್‌ಎಸ್‌ಎಸ್ ಸರಸಂಘಚಾಲಕ ಡಾ. ಮೋಹನ್ ಭಾಗವತ್ ಮತ್ತು ಆರ್‌ಎಸ್‌ಎಸ್ ಸಹಕಾರಿವಾಹ ದತ್ತಾತ್ರೇಯ ಹೊಸಬಾಳೆ ಉದ್ಘಾಟಿಸಿದರು.

ಉದ್ಘಾಟನೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಆರ್‌ಎಸ್‌ಎಸ್ ಸಹಸರ ಕಾರ್ಯವಾಹ ಮುಕುಂದಜೀ, ಮೂರು ದಿನಗಳ ಸಭೆಯು ಹಿಂದಿನ ವರ್ಷದ ಚಟುವಟಿಕೆಗಳನ್ನು ಪರಿಶೀಲಿಸುತ್ತದೆ ಮತ್ತು ಭವಿಷ್ಯದ ಮಾರ್ಗಸೂಚಿಯನ್ನು ರೂಪಿಸುತ್ತದೆ ಎಂದು ಹೇಳಿದರು. ಈ ವರ್ಷ ಆಚರಿಸಲಾಗುವ ಆರ್‌ಎಸ್‌ಎಸ್‌ನ ಶತಮಾನೋತ್ಸವದ ಹಿನ್ನೆಲೆಯಲ್ಲಿ ಯೋಜಿಸಲಾದ ಚಟುವಟಿಕೆಗಳ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗುವುದು. ಆರ್‌ಎಸ್‌ಎಸ್ ಶಾಖೆಗಳ ಸಂಖ್ಯೆಯಲ್ಲಿ ನಗರ ಪ್ರದೇಶಗಳಲ್ಲಿ ಹತ್ತು ಸಾವಿರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಮೂರು ಸಾವಿರದಷ್ಟು ಹೆಚ್ಚಳವಾಗಿದೆ ಎಂದು ಅವರು ತಿಳಿಸಿದರು.

**ಧ್ವನಿ : ಮುಕುಂದಜಿ, ಆರ್‌ಎಸ್‌ಎಸ್ ಸಹಸರಕಾರ್ಯವಾಹ**

<><><><>

ಆಭರಣ ರಫ್ತಿಗೆ ಉತ್ತೇಜನ ನೀಡಲು ರಾಜ್ಯ ಸರ್ಕಾರ ಒತ್ತು ನೀಡಿದೆ. ದೇವನಹಳ್ಳಿ ವಿಮಾನ ನಿಲ್ದಾಣ ಸಮೀಪದಲ್ಲಿ ಜ್ಯುವೆಲ್ಲರಿ ಪಾರ್ಕ್ ನಿರ್ಮಾಣಕ್ಕೆ ಜಾಗ ನೀಡಲು ರಾಜ್ಯ ಸರ್ಕಾರ ಸಿದ್ಧವಾಗಿದ್ದು, ಇದನ್ನು ಆಭರಣ ಉದ್ಯಮಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ನಡೆಯುತ್ತಿರುವ ನಾಲ್ಕು ದಿನಗಳ ಆಭರಣ ಪ್ರದರ್ಶನ ಮತ್ತು ವಾಣಿಜ್ಯ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಭರಣಗಳ ರಫ್ತಿಗೆ ಇರುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಹೂಡಿಕೆ ಮಾಡಲು ಉದ್ಯಮಿಗಳು ಮುಂದಾಗಬೇಕು ಎಂದು ಸಲಹೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>